# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-17189/21-22

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 13/1/22

## ಕಛೇರಿ ಆದೇಶ

ವಿಷಯ: ಶ್ರೀ ಹೆಚ್. ನಾಗರಾಜಪ್ಪ, ಉಪ ನಿರ್ದೇಶಕರು (ನಗರಯೋಜನೆ) ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: ನಅಇ 9 ನಯೋಸೇ 2022 (ಇ), ದಿನಾಂಕ: 10-01-2022

2) ಶ್ರೀ ಹೆಚ್. ನಾಗರಾಜಪ್ಪ, ಉಪ ನಿರ್ದೇಶಕರು (ನಗರಯೋಜನೆ) ರವರ ಮನವಿ ದಿನಾಂಕ: 12-01-2022

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-(1)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆಯಲ್ಲಿ ಶ್ರೀ ಹೆಚ್. ನಾಗರಾಜಪ್ಪ, ನಗರ ಮತ್ತು ಗ್ರಾಮಾಂತರ ಯೋಜನಾ ಉಪ ನಿರ್ದೇಶಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಶ್ರೀ ಕೆ. ಎನ್. ನಾಗರಾಜ, ನಗರ ಮತ್ತು ಗ್ರಾಮಾಂತರ ಯೋಜನಾ ಉಪ ನಿರ್ದೇಶಕರು, ಆನೇಕಲ್ ಯೋಜನಾ ಪ್ರಾಧಿಕಾರ ಇವರ ಸ್ಥಳಕ್ಕೆ ನೇಮಿಸಿ ಆದೇಶಿಸಲಾಗಿದ್ದು, ಈ ಸಂಬಂಧ ಸದರಿ ಅಧಿಕಾರಿಯವರು ಉಲ್ಲೇಖ-(2)ರಂತೆ ಮನವಿ ಸಲ್ಲಿಸಿ, ಸರ್ಕಾರದ ಆದೇಶದಂತೆ ತಮ್ಮನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಬಿಡುಗಡೆಗೊಳಿಸುವಂತೆ ಕೋರಿರುವುದನ್ನು ಪರಿಗಣಿಸಿ, ಸದರಿಯವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಕೆಳಕಂಡ ಷರತ್ತಿಗೊಳಪಡಿಸಿ, ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಧಿಕಾರಿಯು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿ ಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮಾರ್ಡ್, ಗುರುತಿನಚೀಟಿ (Identity Card) ಹಾಗೂ ಲ್ಯಾಪ್‌ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

13/1/22

ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಆದೇಶದ ಮೇರೆಗೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ವಿಕಾಸ ಸೌಧ, ಬೆಂ.ರವರಿಗೆ ಕಳುಹಿಸಿದೆ
: ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ನಗರಯೋಜಕರು, ಬಿ.ಬಿ.ಎಂ.ಪಿ, ಬೆಂಗಳೂರು ರವರಿಗೆ ಕಳುಹಿಸಿದೆ.
: ಅಪರ ನಿರ್ದೇಶಕರು (ನಗರಯೋಜನೆ) / ಜಂಟಿ ನಿರ್ದೇಶಕರು (ನಗರಯೋಜನೆ-ದಕ್ಷಿಣ) ರವರಿಗೆ ಕಳುಹಿಸಿದೆ.
: ಸದಸ್ಯ ಕಾರ್ಯದರ್ಶಿ, ಆನೇಕಲ್ ಯೋಜನಾ ಪ್ರಾಧಿಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮಾಹಿತಿತಂತ್ರಜ್ಞಾನ ಸಲಹೆಗಾರರುರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್ ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಮು.ಲೆ.ಅ / ಮು.ಲೆ.ಪ ರವರಿಗೆರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಧಿಕಾರಿಗೆ / ಕಛೇರಿ ಪ್ರತಿ.